**ದಿನಾಂಕ 13-10-2025 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ.ಎನ್. ಎಲ್. ಎಸ್. ವಾದಿ ಪರ ವಕೀಲರಿಂದಃಃ**

ನಾನು ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದು, ಅವುಗಳನ್ನು ನಾನು ನೋಡಿ ಗುರುತಿಸಿದ್ದು , ನಂತರ ಈ ಕೆಳಕಂಡಂತೆ ದಾಖಲಾತಿಗಳನ್ನು ಗುರುತಿಸಲಾಯಿತು.

1. ಸಾಕ್ಷಿಯು 2003-04 ನೇ ಸಾಲಿನ ಮನೆ ತೆರಿಗೆ ವಿಧಿಸುವ ಪಟ್ಟಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 1 ಎಂದು ಗುರುತಿಸಲಾಯಿತು.

2. ಸಾಕ್ಷಿಯು 2003-04 ನೇ ಸಾಲಿನ ಡಿಮ್ಯಾಂಡ್ ರಿಜಿಸ್ಟರ್ ನ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 2 ಎಂದು ಗುರುತಿಸಲಾಯಿತು.

3. ಸಾಕ್ಷಿಯು ಮನೆ ಕಟ್ಟಡದ ಅನುಮತಿ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 3 ಎಂದು ಗುರುತಿಸಲಾಯಿತು.

4. ಸಾಕ್ಷಿಯು 2014-15 ನೇ ಸಾಲಿನ ಫಾರಂ ನಂ.9 ಮತ್ತು 11 ನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-4 ರಿಂದ ನಿಪಿ-5 ಎಂದು ಗುರುತಿಸಲಾಯಿತು.

5. ಸಾಕ್ಷಿಯು ಮನೆ ಕಟ್ಟಡದ ಅನುಮತಿ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

7. ಸಾಕ್ಷಿಯು ದಿಃ 28-02-2018 ರ ನೊಂದಣಿಯಾದ ಕ್ರಯದ ಕರಾರು ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 7 ಎಂದು ಗುರುತಿಸಲಾಯಿತು.

8. ಸಾಕ್ಷಿಯು ದಿಃ 28-02-2022 ರ ನೊಂದಣಿಯಾದ ಶುದ್ಧ ಕ್ರಯ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 8 ಎಂದು ಗುರುತಿಸಲಾಯಿತು.

9. ಸಾಕ್ಷಿಯು 253 ರ ಸ್ವತ್ತಿನ ಸಂಖ್ಯೆ ಇರುವ ಇ-ಸ್ವತ್ತನ್ನುನೋಡಿ ಗುರುತಿಸಿದ್ದು, ಅದನ್ನು ನಿಪಿ 9 ಎಂದು ಗುರುತಿಸಲಾಯಿತು.

10. ಸಾಕ್ಷಿಯು 10 ಕಂದಾಯ ರಸೀದಿಗಳನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 10 ರಿಂದ ನಿಪಿ-19 ಎಂದು ಗುರುತಿಸಲಾಯಿತು.

11. ಸಾಕ್ಷಿಯು ಎರಡು ಭಾವಚಿತ್ರಗಳನ್ನು ಮತ್ತು ಒಂದು ಸಿಡಿಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ 20 ರಿಂದ ನಿಪಿ-22 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯ ಕೋರಿದ್ದು ಸಮಯಾವಕಾಶ ನೀಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು).**

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.